## ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ

**ಸಿಸಿ ನಂ.217/2019**

ಚಾಸಾ-2 ಫ್ರಾಸಾ-1

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣೀಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 21.06.2025.

| | | |
|---|---|---|
| ಹೆಸರು | : | ಶಿವಪ್ಪ |
| ತಂದೆಯ ಹೆಸರು | : | ಗಿರಿಮಲ್ಲಪ್ಪ |
| ವಯಸ್ಸು | : | 36 ವರ್ಷ |
| ಉದ್ಯೋಗ | : | ಕೂಲಿಕೆಲಸ |
| ವಾಸಸ್ಥಳ | : | ಅಫಜಲಪೂರ |

-: ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-

ಚಾಸಾ 3 ರವರ ಪರಿಚಯ ಇರುತ್ತದೆ. ಸಾಕ್ಷಿಗೆ ಜಪ್ತಿ ಪಂಚನಾಮೆಯ ಪ್ರತಿಯನ್ನು ತೋರಿಸಿದ್ದು, ಸಾಕ್ಷಿಯು ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಜಪ್ತಿ ಪಂಚನಾಮೆಯನ್ನು ನಿಪಿ**-1** ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ**-1**(ಎ) ಎಂದು ಗುರುತಿಸಲಾಯಿತು.

ನಾನು ಸಹಿ ಮಾಡಿದ್ದು ನನಗೆ ನೆನಪಿರುವುದಿಲ್ಲ. ರಾತ್ರಿ 11.00 ಗಂಟೆಗೆ ನನ್ನನ್ನು ಕರೆದುಕೊಂಡು ಪೊಲೀಸರು ಠಾಣೆಗೆ ಬಂದು ಠಾಣೆಯಲ್ಲಿ ಜಪ್ತಿ ಪಂಚನಾಮೆಯನ್ನು ಮಾಡಿ ನನ್ನ ಸಹಿಯನ್ನು ಪಡೆದಿರುತ್ತಾರೆ. ಇಷ್ಟನ್ನು ಹೊರತು ಪಡಿಸಿ ನನಗೆ ಬೇರೆ ಏನು ಗೊತ್ತಿರುವುದಿಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಸ.ಸ.ಅ. ರವರಿಂದ

ದಿನಾಂಕ 02.08.2013 ಬೆಳಿಗ್ಗೆ 11.15 ರಿಂದ 12.40 ರವರೆಗೆ ಬನಹಟ್ಟಿ ಕ್ರಾಸ ಹತ್ತಿರ 3 ಟ್ರ್ಯಾಕ್ಟರಗಳನ್ನು ನನ್ನ ಹಾಗೂ ಚಾಸಾ 3 ರವರ ಸಮಕ್ಷಮ ಜಪ್ತಿ ಪಡಿಸಿಕೊಂಡಿರುತ್ತಾರೆ ಎಂದರೆ ಸಾಕ್ಷಿಯು ನನಗೆ ಅದು ಗೊತ್ತಿಲ್ಲ ನಾನು ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ.

ಸಾಕ್ಷಿಗೆ ಜಪ್ತಿ ಪಡಿಸಿಕೊಂಡರು ಎಂದು ಹೇಳುವ ಟ್ರ್ಯಾಕ್ಟರಗಳ ಭಾವಚಿತ್ರಗಳನ್ನು ತೋರಿಸಿದ್ದು, ಸಾಕ್ಷಿಯು ಅವುಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-**2** ರಿಂದ ನಿಪಿ-**13** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 5 ನೇ ಆರೋಪಿ ಪರ ಶ್ರೀ ಎಂ.ಎಸ್.ಕೆ. ವಕೀಲರಿಂದಃ-**

ಜಪ್ತಿ ಪಡಿಸಿಕೊಂಡ ಟ್ರ್ಯಾಕ್ಟರಗಳ ನಂಬರ ಏನು ಎಂಬ ಪ್ರಶ್ನೆಗೆ ಸಾಕ್ಷಿಯ ಅವುಗಳಿಗೆ ನಂಬರ ಪ್ಲೇಟಗಳು ಇರುವುದಿಲ್ಲ ಎಂದು ನುಡಿಯುತ್ತಾರೆ. ಗುನ್ನ ಸ್ಥಳದ ಚೆಕ್‌ಬಂದಿ ನನಗೆ ಹೇಳಲು ಬರುವುದಿಲ್ಲ. ಪಂಚನಾಮೆಯನ್ನು ಎಷ್ಟು ಗಂಟೆಗೆ ಮಾಡಿರುತ್ತಾರೆ ಎಂಬ ಪ್ರಶ್ನೆಗೆ ಸಾಕ್ಷಿಯು ನಾವು ಜಪ್ತಿ ಪಡಿಸಿಕೊಂಡು ಠಾಣೆಗೆ ಮಾತ್ರ ತಂದಿರುತ್ತೇವೆ ಎಂದು ನುಡಿಯುತ್ತಾರೆ. ಪಂಚನಾಮೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ ಎಂದರೆ ಸರಿ. ಪೊಲೀಸ ಠಾಣೆಯಲ್ಲಿ ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡದೇ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿ.

**ಪಾಟೀ ಸವಾಲುಃ 2 ರಿಂದ 4 ನೇ ಆರೋಪಿ ಪರ ಶ್ರೀ SSP . ವಕೀಲರಿಂದಃ-**

ನಾನು ಪೊಲೀಸ ಠಾಣೆಗೆ ಸಾಕಷ್ಟು ಕೇಸುಗಳಲ್ಲಿ ಪಂಚ ಸಾಕ್ಷಿಯಾಗಿರುತ್ತೇನೆ ಎಂದರೆ ಸರಿ. ಪೊಲೀಸರು ಠಾಣೆಗೆ ಕರೆದು ಸಹಿ ಮಾಡು ಅಂತಾ ತಿಳಿಸಿದ್ದರಿಂದ ಸಹಿ ಮಾಡಿರುತ್ತೇನೆ ಎಂದರೆ ಸರಿ. ನಿಪಿ-1 ರಲ್ಲಿ ಬರೆದ ಸಂಗತಿಗಳು ನನಗೆ ಗೊತ್ತಿಲ್ಲ.

**ಮರು ವಿಚಾರಣೆಃ - ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ. ದಂಡಾಧಿಕಾರಿಗಳು
ಅಫಜಲಪೂರ